# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

<u>ಪತ್ರಿಕಾ ಪ್ರಕಟಣೆ</u> ದಿನಾಂಕ: 16.12.2019

## <u>ಪೂಜ್ಯ ಮಹಾಪೌರರು ರವರಿಂದ ಅಶ್ವಾರೂಢ ಬಸವಣ್ಣನವರ ಪ್ರತಿಮೆಯ ಪ್ರಗತಿ ಕಾಮಗಾರಿ ತಪಾಸಣೆ:</u>



ನಗರದ ಚಾಲುಕ್ಯ ವೃತ್ತದಲ್ಲಿರುವ ಅಶ್ವಾರೂಢ ಬಸವಣ್ಣನವರ ಪ್ರತಿಮೆಯ ಸುತ್ತಲು ಅನುಭವ ಮಂಟಪ ಪರಿಕಲ್ಪನೆಯಡಿ ಮರುವಿನ್ಯಾಸಗೊಳಿಸುವ ಪ್ರಗತಿ ಕಾಮಗಾರಿಯನ್ನು ಪೂಜ್ಯ ಮಹಾಪೌರರು ಪರಿಶೀಲಿಸಿದರು. ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎನ್.ರವಿಕುಮಾರ್, ಪೂರ್ವ ವಲಯ ಜಂಟಿ ಆಯುಕ್ತರಾದ ಶ್ರೀಮತಿ ಪಲ್ಲವಿ, ಅಧೀಕ್ಷಕ ಅಭಿಯಂತರರಾದ ಶ್ರೀ ಬಸವರಾಜ್ ಕಬಾಡೆ, ವಾಸ್ತುಶಿಲ್ಪಿಗಳು ಹಾಗೂ ಬಸವ ಸಮಿತಿಯ ಪದಾಧಿಕಾರಿಗಳು, ಪಾಲಿಕೆ ಅಧಿಕಾರಿಗಳು ಹಾಗೂ ಇತರೆ ಗಣ್ಯರುಗಳು ಉಪಸ್ಥಿತರಿದ್ದರು.

ಬಸವಣ್ಣನವರ ತತ್ವ ಸಿದ್ಧಾಂತಗಳನ್ನು ಈಗಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ನಗರ ಕೇಂದ್ರ ಭಾಗದ ಚಾಲುಕ್ಯ ವೃತ್ತದಲ್ಲಿರುವ ಅಶ್ವಾರೂಢ ಬಸವಣ್ಣನವರ ಪ್ರತಿಮೆಯ ಸುತ್ತಲು ಅನುಭವ ಮಂಟಪ ಪರಿಕಲ್ಪನೆಯಡಿ ಮರುವಿನ್ಯಾಸಗೊಳಿಸಲಾಗುತ್ತಿದ್ದು, ಮಾರ್ಚ್ ಅಂತ್ಯದೊಳಗಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಪೂಜ್ಯಮಹಾಪೌರರು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಬಸವಣ್ಣನವರ ಕಂಚಿನ ಪ್ರತಿಮೆಯ ಸುತ್ತ 12ನೇ ಶತಮಾನದ ವಚನ ಸಾಹಿತ್ಯ ಮತ್ತು ಅನುಭವ ಮಂಟಪ ಪರಿಕಲ್ಪನೆಯಡಿ ಪಾಲಿಕೆ ವತಿಯಿಂದ 1 ಕೋಟಿ ರೂ. ವೆಚ್ಚದಲ್ಲಿ ಮರುವಿನ್ಯಾಸ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈಗಾಗಲೇ ಪ್ರತಿಮೆ ಹಿಂಭಾಗದಲ್ಲಿ ಅರ್ಧ ಚಂದ್ರಾಕೃತಿಯ ಬೃಹತ್ ಗೋಡೆ ನಿರ್ಮಾಣದ ಕಾಮಗಾರಿ ಪೂರ್ಣಗೊಂಡಿದ್ದು, ವಚನಗಳ ಕೆತ್ತನೆ, ಅಲಂಕಾರಿಕ ವಿದ್ಯುತ್ ದೀಪ, ಕಿರು ಉದ್ಯಾನದ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಚಾಲುಕ್ಯ ವೃತ್ತವನ್ನು ಚಾಲುಕ್ಯರ ಕಾಲದ ಗತವೈಭವಕ್ಕೆ ಮರುಕಳಿಸುವಂತೆ ಮಾಡಲು ಕ್ರಮವಹಿಸಲಾಗುತ್ತಿದ್ದು, ಈ ಸಂಬಂಧ ವಾಸ್ತುಶಿಲ್ಪಿಗಳಿಗೆ ವಾರದೊಳಗಾಗಿ ಸಂಪೂರ್ಣ ವೃತ್ತದ ವಿನ್ಯಾಸ ಸಿದ್ಧಪಡಿಸುವಂತೆ ತಿಳಿಸಲಾಗಿದೆ. ವಾಸ್ತುಶಿಲ್ಪಿಗಳು ಸಿದ್ಧಪಡಿಸಿದ ವಿನ್ಯಾಸವನ್ನು ಪಾಲಿಕೆಗೆ ನೀಡಿದ ಬಳಿಕ ಅದಕ್ಕೆ ಅನುದಾನ ಮೀಸಲಿಟ್ಟು ನಿಗದಿತ ಸಮಯದಲ್ಲಿ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುವುದು ಎಂದು ಮಹಾಪೌರರು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**